# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 318 | Pages. 2 | Date: 14-11-2025, FRIDAY | RNI NO: KARKAN/2024/89601 | Kannada Daily

ಸಂಪುಟ : 01 – ಸಂಚಿಕೆ : 318 – ಪುಟಗಳು : 2 | 14-11-2025 ಶುಕ್ರವಾರ | Ph: 8762954248 | ದರ : ₹1


# ಕಾರ್ಮಿಕ ವಿರೋಧಿ ನೀತಿ ವಿರುದ್ಧ ಹೋರಾಟ ಅನಿವಾರ್ಯ

## ಸಿಐಟಿಯು 16ನೇ ರಾಜ್ಯ ಸಮ್ಮೇಳನದಲ್ಲಿ ಡಾ. ಹೇಮಲತಾ ಕರೆ | ಮೂರು ದಿನಗಳ ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೇಂದ್ರ ಸರ್ಕಾರದ ಕಾರ್ಮಿಕ ವಿರೋಧಿ ನೀತಿಗಳ ವಿರುದ್ಧ ನಿರ್ಣಾಯಕ ಹೋರಾಟ ನಡೆಸಬೇಕು ಎಂದು ಸಿಐಟಿಯು ರಾಷ್ಟ್ರೀಯ ಅಧ್ಯಕ್ಷೆ ಡಾ. ಹೇಮಲತಾ ಕರೆ ನೀಡಿದರು.




ನಗರದ ಡಾ. ಅಂಬೇಡ್ಕರ್ ಭವನದಲ್ಲಿ ಆರಂಭವಾದ ಮೂರು ದಿನಗಳ ಸಿಐಟಿಯು 16ನೇ ರಾಜ್ಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿ, ದುಡಿಯುವ ಜನರ ವಿರೋಧಿಯಾದ ಕೇಂದ್ರ ಸರ್ಕಾರದ ಶ್ರಮ ಶಕ್ತಿ ನೀತಿಗಳ ವಿರುದ್ಧ ಹೋರಾಟ ತೀವ್ರಗೊಳಿಸಬೇಕಾಗಿದೆ. ಕಾರ್ಮಿಕರು ಶತಮಾನಗಳಿಂದ ಹೋರಾಟದ ಮೂಲಕ ಪಡೆದ ಹಕ್ಕುಗಳನ್ನ ಕಾನೂನು ತಿದ್ದುಪಡಿ ಮೂಲಕ ನಾಶ ಮಾಡಲಾಗುತ್ತಿದೆ. ಶ್ರಮ ಶಕ್ತಿ ಯೋಜನೆ ಮೂಲಕ ಕಾರ್ಮಿಕ ಸಚಿವಾಲಯವನ್ನೇ ನಿತ್ರಾಣಗೊಳಿಸುವ ಕೆಲಸ ನಡೆಯುತ್ತಿದೆ. ಕಾರ್ಮಿಕ ಇಲಾಖೆ ಕಾರ್ಮಿಕರ ರಕ್ಷಣೆ ಮಾಡುವ ಬದಲು ಮಾಲೀಕರ ಪರವಾಗಿ ವಕಾಲತ್ತು ವಹಿಸುವ ಸಂಪರ್ಕ ಸಾಧನವಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಶ್ರಮ ಶಕ್ತಿ ಯೋಜನೆ ಸಂವಿಧಾನಾತ್ಮಕ ಹಕ್ಕುಗಳನ್ನು ನಾಶ ಮಾಡುವ ಮನುಸ್ಮೃತಿ ಆಧಾರಿತ ನೀತಿಗಳ ಜಾರಿಗೆ ಸಂಚು ರೂಪಿಸಿದೆ. ಮಹಿಳಾ ಶೋಷಣೆ, ದೀನ ದಲಿತರ ಶೋಷಣೆ ಈ ನೀತಿಯಲ್ಲಿ ಅಡಗಿದೆ. ಇದು ಆರ್‌ಎಸ್‌ಎಸ್ ನೀತಿಗಳನ್ನು ದುಡಿಯುವ ಜನರ ಮೇಲೆ ಹೇರುವ ಯತ್ನ ಎಂದು ಕಿಡಿಕಾರಿದರು.

ಕೇಂದ್ರ ಸರ್ಕಾರ ಕಳೆದ 11 ವರ್ಷಗಳಿಂದ ಕಾರ್ಮಿಕ ಸಂಘಟನೆಗಳ ಜೊತೆಗೆ ಕೇಂದ್ರ ಸರ್ಕಾರ ಕನಿಷ್ಠ ಸಮಾಲೋಚನೆ ನಡೆಸಲಿಲ್ಲ. ಕಾರ್ಮಿಕ ಹಕ್ಕುಗಳ ಜಾರಿ ಬಗ್ಗೆ ಭಾರತದ ಕಾರ್ಮಿಕ ಸಂಘಟನೆಗಳ ಸಮ್ಮೇಳನವನ್ನೇ ನಡೆಸಿಲ್ಲ. ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಕಾರ್ಮಿಕ ಕಾನೂನಿನ ಉಲ್ಲಂಘನೆ ಕ್ರಿಮಿನಲ್ ಅಪರಾಧ ಅಲ್ಲ ಎನ್ನುವ ನೀತಿ ಜಾರಿಯಾಗಿದೆ. ಬದಲಾಗಿ ಅದು ಕೇವಲ ದಂಡಕ್ಕೆ ಸೀಮಿತಗೊಳಿಸಲಾಗಿದೆ. ಇದಕ್ಕೆ ಬದಲಾಗಿ ಕಾರ್ಮಿಕರು ಹೋರಾಟಕ್ಕೆ ಕರೆ ನೀಡಿದರೆ ಅವರನ್ನು ಗೃಹ ಬಂಧನಕ್ಕೆ ಒಳಪಡಿಸುವ ಮೂಲಕ ಕಾರ್ಮಿಕರ ಪ್ರಜಾಸತ್ತಾತ್ಮಕ ಹಕ್ಕುಗಳನ್ನ ನಾಶಮಾಡಲಾಗುತ್ತಿದೆ. ಇದು ಕೇವಲ ಬಿಜೆಪಿ ಅಧಿಕಾರದಲ್ಲಿ ಇರುವ ರಾಜ್ಯದಲ್ಲಿ ಮಾತ್ರ ಅಲ್ಲ ಕಾಂಗ್ರೆಸ್ ಆಡಳಿತ ರಾಜ್ಯದಲ್ಲೂ ಕೂಡ ಇದೇ ನಡೆಯುತ್ತಿದೆ. ಸಿಐಟಿಯು 17ನೆ ರಾಷ್ಟ್ರೀಯ ಸಮ್ಮೇಳನ ಕಾರ್ಮಿಕರ ಮೇಲಿನ ಈ ದಾಳಿಗಳನ್ನ ಗುರ್ತಿಸಿ ಹೋರಾಟಕ್ಕೆ ಕರೆ ನೀಡಿತ್ತು. ಜಗತ್ತಿನ ಕೋಟಿ ಕೋಟಿ ದುಡಿಯುವ ವರ್ಗ ಸಮಸ್ಯೆಗೆ ಸಿಲುಕಿದೆ. ಕೂಲಿ ಅಭದ್ರತೆ, ಕೆಲಸದ ಅಭದ್ರತೆ, ಸಾಮಾಜಿಕ ಅಭದ್ರತೆ ಕಾರ್ಮಿಕರನ್ನ ಆತಂಕದಲ್ಲಿ ಇರುವಂತೆ ಮಾಡಿದೆ. ಇದಕ್ಕೆ ಬಂಡವಾಳಶಾಹಿ ವ್ಯವಸ್ಥೆಯ ಬಿಕ್ಕಟ್ಟು ಕಾರಣ ಆಗಿದ್ದು ಈ ಬಿಕ್ಕಟ್ಟಿನ ಹೊರೆಯನ್ನ ಕಾರ್ಮಿಕರ ಮೇಲೆ ವರ್ಗಾವಣೆ ಮಾಡಿ ಶೋಷಣೆ ಮಾಡಲಾಗುತ್ತಿದೆ. ಶೋಷಣೆ ವಿರೋಧಿಸಿ ಜಗತ್ತಿನ ದುಡಿಯುವ ವರ್ಗದ ಹೋರಾಟ ಕೂಡ ಹೆಚ್ಚಾಗಿದೆ. ಎಲ್ಲಾ ವರ್ಗದ ಜನರು ಹೋರಾಟಕ್ಕೆ ಇಳಿಯುತ್ತಿದ್ದಾರೆ. ಆದರೆ ದುಡಿಯುವ ಜನರು ಹೋರಾಟಕ್ಕೆ ಇಳಿದರೆ ಬೇರೆ ಬೇರೆ ರೀತಿಯ ಷಡ್ಯಂತ್ರದ ಮೂಲಕ ಅವರ ಹೋರಾಟ ಒಡೆಯಲು ದಿಕ್ಕು ತಪ್ಪಿಸುವ ಯತ್ನ ನಡೆಯುತ್ತಿದೆ ಎಂದರು.

ಉದ್ಘಾಟನಾ ಸಮಾರಂಭಕ್ಕೂ ಮೊದಲು ಕೆಂಪು ವಸ್ತ್ರಧಾರಿಗಳ ಘೋಷಣೆ ನಡುವೆ ಸಿಐಟಿಯು ರಾಜ್ಯ ಅಧ್ಯಕ್ಷೆ ಎಸ್. ವರಲಕ್ಷ್ಮಿ ಧ್ವಜಾರೋಹಣ ನೆರವೇರಿಸಿದರು.

ಉದ್ಘಾಟನಾ ಸಮಾರಂಭದಲ್ಲಿ ಸಿಐಟಿಯು ರಾಷ್ಟ್ರೀಯ ಕಾರ್ಯದರ್ಶಿ ಎನ್.ಐ.ಉಮೇಶ್, ರಾಜ್ಯ ಉಪಾಧ್ಯಕ್ಷ



ವಿಜೆಕೆ ನಾಯರ್, ಸ್ವಾಗತ ಸಮಿತಿ ಅಧ್ಯಕ್ಷ ಧರ್ಮೇಶ್, ಸ್ವಾಗತ ಸಮಿತಿ ಪ್ರಧಾನ ಕಾರ್ಯದರ್ಶಿ ಎಂ.ಬಿ.ಪುಷ್ಪ ಮತ್ತಿತರಿದ್ದರು. ಕಾರ್ಮಿಕ ಪ್ರತಿನಿಧಿಗಳನ್ನು ಸ್ವಾಗತ ಸಮಿತಿ ಗೌರವಾಧ್ಯಕ್ಷ ಎಚ್. ಎನ್. ಪರಮಶಿವಯ್ಯ ಸ್ವಾಗತಿಸಿದರು.

# ನ. 17ರಂದು ಹಾಸನದಲ್ಲಿ ಏಕತಾ ನಡಿಗೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150ನೇ ಜನ್ಮದಿನಾಚರಣೆ ಪ್ರಯುಕ್ತ ನ.17 ರಂದು ನಗರದಲ್ಲಿ ಏಕತಾ ನಡಿಗೆ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಕೇಂದ್ರ ಸರ್ಕಾರದ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯದ ಸಹಯೋಗದಲ್ಲಿ ಸರ್ದಾರ್ ಯೂನಿಟಿ ಅಭಿಯಾನವನ್ನು ರಾಷ್ಟ್ರವ್ಯಾಪಿ ಹಮ್ಮಿಕೊಳ್ಳಲಾಗಿದೆ. ಸೋಮವಾರ ಬೆಳಿಗ್ಗೆ 10 ಗಂಟೆಗೆ ರೈಲ್ವೆ ನಿಲ್ದಾಣದಿಂದ ಏಕತಾ ನಡಿಗೆ ಆರಂಭವಾಗಲಿದೆ ಎಂದು ಹೇಳಿದರು.

ರೈಲ್ವೆ ನಿಲ್ದಾಣದಿಂದ ಬಿಎಂ. ರಸ್ತೆ, ಡಿಸಿ ಕಚೇರಿ ಮುಂಭಾಗ ಹಾದು, ಎನ್.ಆರ್.ವೃತ್ತ, ಹೇಮಾವತಿ ಪ್ರತಿಮೆ ಮೂಲಕ ಮಧ್ಯಾಹ್ನ 12 ಗಂಟೆ ವೇಳೆಗೆ ಜಿಲ್ಲಾ ಕಸಾಪ ಭವನ ತಲುಪಿ, ಅಲ್ಲೇ ಸಮಾಪ್ತಿಯಾಗಲಿದೆ ಎಂದು ತಿಳಿಸಿದರು.

ಏಕತಾ ನಡಿಗೆಯಲ್ಲಿ ಸುಮಾರು 2000ಕ್ಕೂ ಹೆಚ್ಚು ಜನರು ಭಾಗವಹಿಸಲಿದ್ದಾರೆ. ಯುವಕರು ಹಾಗೂ ನಾಗರಿಕರಲ್ಲಿ ರಾಷ್ಟ್ರಭಕ್ತಿ ಮತ್ತು ಏಕತೆಯ ಸಂದೇಶವನ್ನು ಸಾರುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಇದರ ಉಸ್ತುವಾರಿಯನ್ನಾಗಿ ರಾಜ್ಯಸಭಾ ಸದಸ್ಯ ಹಾಗೂ ಖ್ಯಾತ ಚಲನಚಿತ್ರ ನಟ ಜಗ್ಗೇಶ್ ಅವರನ್ನು ನೇಮಿಸಲಾಗಿದೆ ಎಂದರು.

ರಾಷ್ಟ್ರದಾದ್ಯಂತ ನಡೆಯಲಿರುವ ಈ ಕಾರ್ಯಕ್ರಮದ ಅಂತಿಮ ಹಂತದಲ್ಲಿ ಗುಜರಾತ್‌ನಲ್ಲಿ 180 ಕಿಲೋ ಮೀಟರ್ ಉದ್ದದ ಪಾದಯಾತ್ರೆ ನಡೆಯಲಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಹಲವು ಪ್ರಮುಖರು ಭಾಗವಹಿಸಲಿದ್ದಾರೆ ಎಂದು ಅವರು ತಿಳಿಸಿದರು.

ಹಾಸನದಲ್ಲಿ ನಡೆಯುವ ನಡಿಗೆಯಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರು ಹಾಗೂ ಜನಪ್ರತಿನಿಧಿಗಳು ಸಕ್ರಿಯವಾಗಿ ಭಾಗವಹಿಸುವಂತೆ ಅವರು ಮನವಿ ಮಾಡಿದರು.

ಕೇಂದ್ರ ಕ್ರೀಡಾ ಸಚಿವಾಲಯದ ಅಧಿಕಾರಿ ಅಖಿಲ್ ಅವರು ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳು, ಶಾಸಕರು, ಸಂಸದರು ಹಾಗೂ ಅಧಿಕಾರಿಗಳನ್ನು ಆಹ್ವಾನಿಸಲಿದ್ದಾರೆ. ಇದು ಪಕ್ಷಾತೀತವಾಗಿ ನಡೆಯುತ್ತಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಅಖಿಲ್, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಅಮಿತ್ ಶೆಟ್ಟಿ ಮತ್ತು ಗಿರೀಶ್ ಉಪಸ್ಥಿತರಿದ್ದರು.

# ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಅಭಿವೃದ್ಧಿಗೆ 27.93 ಕೋಟಿ ರೂ.

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯನ್ನು ಮತ್ತಷ್ಟು ಅಭಿವೃದ್ಧಿಪಡಿಸಿ ಜಿಲ್ಲೆಯ ಜನರ ಆರೋಗ್ಯದ ಅವಶ್ಯಕತೆಗಳನ್ನು ಸಮರ್ಪಕವಾಗಿ ಪೂರೈಸಲು ಸಚಿವ ಸಂಪುಟ 27.93 ಕೋಟಿ ರೂ.ಗೆ ಅನುಮೋದನೆ ನೀಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ.

ಸೆ. 22 ರಂದು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡ ನಿರ್ಮಾಣ, ನಿಂತಿದ್ದ ಕಾಮಗಾರಿ ಪೂರ್ಣಗೊಳಿಸಲು 9 ಕೋಟಿ ರೂ.ಗೆ ಹೆಚ್ಚು ಅನುದಾನ ಮಂಜೂರು ಮಾಡಲಾಗಿದೆ. ಕಟ್ಟಡ ಬಾಕಿ ಕಾಮಗಾರಿ ಪೂರ್ಣಗೊಳಿಸುವ ಕೆಲಸ ನಡೆದಿದೆ.



ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸಂಪೂರ್ಣ ಕಾರ್ಯ ರೂಪಕ್ಕೆ ತರಲು ಮತ್ತೊಂದು ದೊಡ್ಡ ಹೆಜ್ಜೆಯನ್ನು ನಮ್ಮ ಸರ್ಕಾರ ಇಟ್ಟಿದೆ. ಸೆ. 6 ರಂದು ಆಸ್ಪತ್ರೆಗೆ ಭೇಟಿ ನೀಡಿ ಸೂಪರ್ ಸ್ಪೇಷಲಿಟಿ ಆಸ್ಪತ್ರೆ ತುರ್ತಾಗಿ ಕಾರ್ಯ ಪ್ರಾರಂಭಿಸಲು, ಪ್ರಾಥಮಿಕ ಹಂತದಲ್ಲಿ ಕಾರ್ಡಿಯಾಲಿಜಿ, ನ್ಯೂರಾಲಜಿ, ನ್ಯೂರೋಸರ್ಜರಿ, ಯುರಾಲಜಿ ಮತ್ತು ಕಾರ್ಡಿಯಾ ಥೊರಾಸಿಕ್ ಸರ್ಜರಿ ವಿಭಾಗಗಳಿಗೆ ಅವಶ್ಯಕವಿರುವ ಉಪಕರಣ ಮತ್ತು ಪಿಠೋಪಕರಣಗಳು ಹಾಗೂ ಅದಕ್ಕೆ ಅವಶ್ಯ ಅನುದಾನದ ಅಂದಾಜು ವೆಚ್ಚಕ್ಕೆ ಪ್ರಸ್ತಾವನೆ ಸಲ್ಲಿಸಲು ಹಾಗೂ ಕ್ಯಾಥ್ ಲ್ಯಾಬ್ ಸೌಲಭ್ಯಗಳನ್ನು ಒಳಗೊಂಡು ಕಾರ್ಡಿಯಾಕ್ ಯುನಿಟ್‌ನ್ನು ಸ್ಥಾಪಿಸಲು ಅಗತ್ಯ ಅನುದಾನದ ಅಂದಾಜು ಮೊತ್ತಕ್ಕೆ ಮನವಿ ಸಲ್ಲಿಸಲು ಸೂಚಿಸಲಾಗಿತ್ತು. ಅದರಂತೆ ವೈದ್ಯಕೀಯ ಉಪಕರಣಗಳು, ಅವಶ್ಯ ಪೀಠೋಪಕರಣಗಳು ಮತ್ತು ಕ್ಯಾಥ್ ಲ್ಯಾಬ್‌ನೊಂದಿಗೆ ಕಾರ್ಡಿಯಾಕ್ ಯುನಿಟ್ ಒಳಗೊಂಡು 5 ಸೂಪರ್ ಸ್ಪೆಷಾಲಿಟಿ ವಿಭಾಗ ಆರಂಭಿಸಲು 27.93 ಕೋಟಿ ರೂ. ಅನುದಾನದ ಅವಶ್ಯಕತೆಯನ್ನು ಭರಿಸಲು ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆ ಪ್ರಸ್ತಾವನೆ ಸಲ್ಲಿಸಿದ್ದಾರೆ.

ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಸರ್ಕಾರ 27.93 ಕೋಟಿ ರೂ. ಪ್ರಸ್ತಾವನೆಗೆ ಅನುಮೋದನೆ ಮಾಡಿ ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ತ್ವರಿತವಾಗಿ ಕಾರ್ಯರೂಪಕ್ಕೆ ತರಲು ತೀರ್ಮಾನಿಸಿದೆ. ಜಿಲ್ಲೆಯ ಜನರ ಆರೋಗ್ಯದ ಅವಶ್ಯಕತೆಗಳನ್ನು ಸಮರ್ಪಕವಾಗಿ ಪೂರೈಸಲು ಇದು ಸಹಕಾರಿಯಾಗಲಿದೆ. ನಮ್ಮ ಮನವಿಗೆ ಸ್ಪಂದಿಸಿ ಜಿಲ್ಲೆಯ ಜನರ ಧ್ವನಿಗೆ ಗೌರವಿಸಿ 27.93 ಕೋಟಿ ರೂ.ಗೆ ಪ್ರಸ್ತಾವನೆಗೆ ಒಪ್ಪಿಗೆ ನೀಡಿದ ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಧನ್ಯವಾದ ಸಲ್ಲಿಸಿದ್ದಾರೆ.

# ಗಾಯಾಳುಗಳಿಗೆ ಶೀಘ್ರ ಪರಿಹಾರ ದೊರೆಯುವಂತೆ ಕ್ರಮ ವಹಿಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ವನ್ಯ ಜೀವಿಗಳ ದಾಳಿಯಿಂದ ಗಾಯಗೊಂಡವರಿಗೆ 24 ಗಂಟೆಯೊಳಗೆ ಪರಿಹಾರ ನೀಡಲು ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಮಾನವ ಮತ್ತು ಪ್ರಾಣಿಗಳ ಸಂಘರ್ಷ ಕುರಿತು ನಡೆದ ಸಭೆಯಲ್ಲಿ ಮಾತನಾಡಿ, 2025ರ ಜನವರಿಯಿಂದ ಇದುವರೆಗೆ ಸಂಭವಿಸಿರುವ ಅವಘಡಗಳು, ಸಾವು, ಗಾಯಗೊಂಡವರ ಪಟ್ಟಿಯನ್ನು ತಾಲ್ಲೂಕುವಾರು ಸಿದ್ದಪಡಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಗಾಯಗೊಂಡವರಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾಗೂ ಸರ್ಕಾರದಲ್ಲಿ ಎಪೆನಾಲ್ ಆಗಿರುವ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ನೀಡಲು ಒಂದು ಸುತ್ತೋಲೆ ಹೊರಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ತಾಲ್ಲೂಕು ಆರೋಗ್ಯ ಅಧಿಕಾರಿಗಳು ವಿಳಂಬ ಮಾಡದೆ ಗಾಯಾಳುಗಳ ಆರೋಗ್ಯದ ಮೇಲೆ ಉಂಟಾಗಿರುವ ತೀವ್ರತೆಯನ್ನು ಅರಿತು ತಕ್ಷಣ ಪ್ರಮಾಣ ಪತ್ರವನ್ನು ನೀಡಿ ಪರಿಹಾರ ನೀಡಲು ಸಹಾಯವಾಗುತ್ತದೆ ಎಂದು ತಿಳಿಸಿದರು.




## ಡಿ. 6ಕ್ಕೆ ಜಿಲ್ಲೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ

ಜಿಲ್ಲೆಯಲ್ಲಿ ವಿವಿಧ ಇಲಾಖೆಗಳ ಮೂಲಕ ಪೂರ್ಣಗೊಂಡಿರುವ ಕಾಮಗಾರಿಗಳ ಉದ್ಘಾಟನೆ, ಕಾಮಗಾರಿಗಳ ಶಂಕುಸ್ಥಾಪನೆಗೆ ಹಾಗೂ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ ಸವಲತ್ತು ವಿತರಣೆಗಾಗಿ ಸಂಪೂರ್ಣ ಮಾಹಿತಿಯನ್ನು ನೀಡುವಂತೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿ. 6 ರಂದು ಜಿಲ್ಲೆಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ತಮ್ಮ ತಮ್ಮ ಇಲಾಖೆಯ ಮಾಹಿತಿಗಳನ್ನು ನೀಡುವಂತೆ ನಿರ್ದೇಶನ ನೀಡಿದರು.

ಪರಿಹಾರಕ್ಕೆ ಜನರು ಅಲೆದಾಟ ಮಾಡದಂತೆ ಎಚ್ಚರಿಕೆವಹಿಸಿ ಪರಿಹಾರ ಒದಗಿಸಬೇಕು. ಶಾಶ್ವತ ಅಂಗವಿಕಲತೆಗೆ 10 ಲಕ್ಷ ರೂ., ಭಾಗಶಃ ಅಂಗವಿಕಲತೆಗೆ 5 ಲಕ್ಷ ರೂ. ಪರಿಹಾರ ನೀಡಲು ಅಧಿಕಾರಿಗಳು ನಿಗಾವಹಿಸಲು ನಿರ್ದೇಶನ ನೀಡಿದರು. ಬೆಳೆ ,ಪೈಪ್ ಲೈನ್ ,ಗೇಟ್, ಕಾಂಪೌಂಡ್, ಶೆಡ್ ಮೇಲೆ ಪ್ರಾಣಿಗಳು ದಾಳಿ ಮಾಡಿ ನಷ್ಟ ಉಂಟು ಮಾಡಿದಾಗ ಪರಿಹಾರ ನೀಡಲು ಕ್ರಮವಹಿಸಬೇಕು. ತೆಂಗು, ಅಡಿಕೆ, ಕಾಫಿ, ಮೆಣಸು ಮತ್ತಿತರ ತೋಟಗಾರಿಕೆ ಬೆಳೆಗಳನ್ನು ವನ್ಯ ಪ್ರಾಣಿಗಳು ದಾಳಿ ಮಾಡಿ ನಷ್ಟ ಉಂಟು ಮಾಡಿದಾಗ ಸೂಕ್ತ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದಕ್ಕೆ ನೆರವಾಗುವಂತೆ ಒಂದು ಸಮಿತಿ ರಚಿಸಿ ವರದಿ ತಯಾರಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಬಿಕ್ಕೋಡು, ಅರೆಹಳ್ಳಿ ವ್ಯಾಪ್ತಿಯಲ್ಲಿ ಆನೆಗಳು ಓಡಾಡುವುದರಿಂದ ಸಾರ್ವಜನಿಕರು ಕತ್ತಲೆ ಸಮಯದಲ್ಲಿ ಎಚ್ಚರವಹಿಸಲು ಸಹಕಾರಿಯಾಗುವಂತೆ ರಸ್ತೆಯ ತಿರುವಿನಲ್ಲಿ ಹಾಗೂ ಎರಡು ಬದಿಗಳಲ್ಲಿ ವಿದ್ಯುತ್ ದೀಪ ಅಳವಡಿಳಸಲು ಕ್ರಮ ಕೈಗೊಳ್ಳಬೇಕು. ಮಲೆನಾಡು ಪ್ರದೇಶದಲ್ಲಿ ನೆಟ್ ವರ್ಕ್ ಸಿಗದಿರುವ ಗ್ರಾಮಗಳು ಮತ್ತು ಸ್ಥಳಗಳನ್ನು ಗುರುತಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಮಂಜುನಾಥ್ ,ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಬ್ ಕುಮಾರ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಬಾಬು, ಭೂ ದಾಖಲೆಗಳ ಇಲಾಖೆ ಉಪನಿರ್ದೇಶಕಿ ಹೇಮಲತಾ ಇತರರಿದ್ದರು.

# ಕ್ರೀಡೆಗೆ ಆದ್ಯತೆ ನೀಡದ ಶಿಕ್ಷಣ ಅಪೂರ್ಣ: ಸಿಮೆಂಟ್ ಮಂಜು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಕ್ರೀಡೆಗಳು ಸಹಕಾರಿಯಾಗಿವೆ. ಅದರಿಂದ ಮಕ್ಕಳ ದೈಹಿಕ ಹಾಗೂ ಮಾನಸಿಕ ಆರೋಗ್ಯ ಉತ್ತಮವಾಗಿರುತ್ತದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲೂಕಿನ ಯಸಳೂರು ಹೋಬಳಿ ಕೇಂದ್ರದಲ್ಲಿರುವ ಹಿರಿಯ ಪ್ರಾಥಮಿಕ ಪಾಠ ಶಾಲೆಯಲ್ಲಿ ನೂತನ ಶಾಲಾ ಕಟ್ಟಡಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಕ್ರೀಡಾ ಚಟುವಟಿಕೆಗಳಿಲ್ಲದ ಶಿಕ್ಷಣ ಪರಿಪೂರ್ಣವಾಗದು. ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ದೈಹಿಕ ಚಟುವಟಿಕೆ ಅನಿವಾರ್ಯ ಹಾಗೂ ಕಡ್ಡಾಯ ಎಂದರು. ಭಾರತವು ಕ್ರೀಡೆಗಳಲ್ಲಿ ಹಿಂದುಳಿಯಲು ಅನೇಕ ಕಾರಣಗಳಿವೆ. ಇತರ ದೇಶಗಳಿಗೆ ಹೋಲಿಸಿದರೆ ಭಾರತದಲ್ಲಿ ಕ್ರೀಡೆಗಳಿಗೆ ನೀಡಿರುವ ಮಹತ್ವ ಕಡಿಮೆ. ಜೊತೆಗೆ ನಿರ್ಲಕ್ಷಕ್ಕೊಳಗಾದ ದೈಹಿಕ ಶಿಕ್ಷಣ, ಕ್ರೀಡೆಗಳ ಬಗ್ಗೆ ಪೋಷಕರ ನಿರಾಸಕ್ತಿ, ಗ್ರಾಮೀಣ ಪ್ರತಿಭೆಗಳಿಗೆ ಸೂಕ್ತ ತರಬೇತಿ ಹಾಗೂ ಸೌಲಭ್ಯಗಳ ಕೊರತೆ, ಶಾಲೆಗಳಲ್ಲಿ ಆಟದ ಮೈದಾನದ ಕೊರತೆಯೆ ಮೂಲ ಕಾರಣವಾಗಿದೆ. ಕ್ರೀಡೆಗಳಲ್ಲಿ ಮಹತ್ತರ ಸಾಧನೆ ಸಾಧಿಸಲು ಪ್ರಾಥಮಿಕ ಹಂತದಿಂದಲೇ ದೈಹಿಕ ಶಿಕ್ಷಣ ಅತ್ಯಂತ ಅವಶ್ಯಕ. ಎಲ್ಲ ವಿಷಯಗಳ ಕಲಿಕಾ ಸಾಮರ್ಥ್ಯಕ್ಕೆ ಸದೃಢವಾದ ದೇಹದ ಜೊತೆಗೆ ಸದೃಢವಾದ ಮನಸ್ಸೂ ಬೇಕು ಇದನ್ನು ಹೊಂದಲು ಶಾರೀರಿಕ ಶಿಕ್ಷಣ ಅವಶ್ಯಕ ಎಂಬುದನ್ನು ಶಿಕ್ಷಣತಜ್ಞರು ಹೇಳುತ್ತಲೇ ಬಂದಿದ್ದಾರೆ. ಆದರೆ ಇದಕ್ಕನುಗುಣವಾಗಿ ಶಾಲೆಗಳಲ್ಲಿ ದೈಹಿಕ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡದಿರುವುದು ಬೇಸರದ ವಿಷಯ. ಸರ್ಕಾರ ಕೂಡಲೇ ತಾಲೂಕಿನಲಿರುವ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವಂತೆ ಆಗ್ರಹಿಸಿದರು.ತಾಲ್ಲೂಕಿನಲ್ಲಿ ಹಲವು ಸರ್ಕಾರಿ ಕಟ್ಟಡಗಳು ಉಪಯೋಗಕ್ಕಿಲ್ಲದೇ ಪಾಳು ಬಿದ್ದಿರುವುದು ನನ್ನ ಗಮನಕ್ಕೆ ಬಂದಿದೆ. ಈ ಕುರಿತಂತೆ ಸರ್ಕಾರಕ್ಕೆ ವರದಿ ಸಲ್ಲಿಸಿಶಿಥಿಲ ಕಟ್ಟಡಗಳನ್ನು ನೆಲಸಮಗೊಳಿಸಲುಸರ್ಕಾರಕ್ಕೆ ಪತ್ರ ಬರೆಯುತ್ತೇನೆ ಇದರಿಂದ ಪಾಳು ಬಿದ್ದಿರುವ ಕಟ್ಟಡಗಳಲ್ಲಿ ನೆಡೆಯುವ ಅನೈತಿಕ ಚಟುವಟಿಕೆಗಳಿಗೆ ಕಡಿವಾಣ ಹಾಕಿದಂತಾಗುತ್ತದೆಎಂದರು. ಯಸಳೂರು ಶಾಲೆಯಲ್ಲಿ 14.5

# ಬೀದಿ ನಾಯಿಗಳ ಸಂತಾನ ಶಕ್ತಿ ಹರಣ ಶಸ್ತ್ರ ಚಿಕಿತ್ಸೆ ಆರಂಭ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ನಗರ ಹೊರವಲಯದ ಮಳಲಿ ತ್ಯಾಜ್ಯ ವಿಲೇವಾರಿ ಘಟಕದ ಆವರಣದಲ್ಲಿ ಐಕೇರ್ ಆಫ್ ವಾಯ್ಸ್‌ಲೆಸ್ ಅನಿಮಲ್ ಟ್ರಸ್ಟ್‌ಟಿ ವತಿಯಿಂದ ಬೀದಿ ನಾಯಿಗಳ ಸಂತಾನ ಶಕ್ತಿ ಹರಣ ಶಸ್ತ್ರ ಚಿಕಿತ್ಸೆಗೆ ಚಾಲನೆ ದೊರೆಯಿತು.

ಉಪವಿಭಾಗಾಧಿಕಾರಿ ರಾಜೇಶ್ ಮಾತನಾಡಿ, ದೇಶಾದ್ಯಂತ ಬೀದಿ ನಾಯಿಗಳ



ಹಾವಳಿ ಹೆಚ್ಚಾಗಿರುವುದರಿಂದ ಸರ್ವೋಚ್ಚ ನ್ಯಾಯಾಲಯ ಹಾಗೂ ಉಚ್ಚ ನ್ಯಾಯಾಲಯಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ರಾಜ್ಯ ಸರ್ಕಾರಕ್ಕೆ ಮಾರ್ಗಸೂಚಿ ನೀಡಿವೆ. ಆ ಮಾರ್ಗಸೂಚಿಯ ಮೇರೆಗೆ ಪುರಸಭೆ ವತಿಯಿಂದ ಟೆಂಡರ್ ಮೂಲಕ ಈ ಯೋಜನೆ ಕೈಗೊಳ್ಳಲಾಗಿದೆ. ಪಟ್ಟಣದ ವ್ಯಾಪ್ತಿಯಲ್ಲಿ ಶಾಂತಿ, ಸುರಕ್ಷತೆ ಮತ್ತು ಸಾರ್ವಜನಿಕ ಆರೋಗ್ಯ ಕಾಪಾಡುವ ಉದ್ದೇಶದಿಂದ ಈ ಕಾರ್ಯಾಚರಣೆ ನಡೆಯುತ್ತಿದೆ ಎಂದು ಹೇಳಿದರು.

ಪಟ್ಟಣದ ಬೀದಿಗಳಲ್ಲಿ ಬೆಳಗ್ಗೆಯಿಂದಲೇ ಕಾರ್ಯಾಚರಣೆ ಆರಂಭವಾಗಿದ್ದು, ಬೀದಿ ನಾಯಿಗಳನ್ನು ಸುರಕ್ಷಿತವಾಗಿ ಸೆರೆಹಿಡಿದು ಇರಿಸಲಾಗುತ್ತಿದೆ. ನಂತರ ಪಶು ವೈದ್ಯರಿಂದ ನಾಯಿಗಳ ಆರೋಗ್ಯ ಪರಿಶೀಲನೆ ನಡೆಸಿ, ಸಂತಾನ ಹರಣ ಪ್ರಕ್ರಿಯೆ ಕೈಗೊಳ್ಳಲಾಗುತ್ತದೆ. ಅಂದಾಜು ಪಟ್ಟಣ ವ್ಯಾಪ್ತಿಯಲ್ಲಿ ಸುಮಾರು 500ಕ್ಕೂ ಹೆಚ್ಚು ಬೀದಿ ನಾಯಿಗಳಿದ್ದು, ಪ್ರತಿದಿನ ಸುಮಾರು 20 ನಾಯಿಗಳನ್ನು ಸೆರೆ ಹಿಡಿದು ಶಸ್ತ್ರಚಿಕಿತ್ಸೆ ಮಾಡುವ ಗುರಿ ನಿಗದಿಯಾಗಿದೆ. ಪ್ರಕ್ರಿಯೆಯ ಬಳಿಕ ನಾಯಿಗಳಿಗೆ ಅಗತ್ಯ ಆಹಾರ, ಆರೈಕೆ ಹಾಗೂ ಚಿಕಿತ್ಸೆ ನೀಡಲಾಗುತ್ತದೆ. ಶಸ್ತ್ರ ಚಿಕಿತ್ಸೆ ಪೂರ್ಣಗೊಂಡ ನಂತರ ನಾಯಿಗಳ ಕಿವಿಗಳಿಗೆ ಐವಿಟಿ ಆಕಾರದ ಗುರುತು ಹಾಕಿ, ಮತ್ತೆ ಅದೇ ಪ್ರದೇಶದಲ್ಲಿ ಬಿಡಲಾಗುವುದು ಎಂದು ಹೇಳಿದರು.

# ಅಕ್ರಮವಾಗಿ ಸಾಗಿಸುತ್ತಿದ್ದ 12 ಹಸುಗಳ ರಕ್ಷಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಅಕ್ರಮವಾಗಿ ಗೋ ಸಾಗಾಟ ಮಾಡುತ್ತಿದ್ದ ವಾಹನವನ್ನು ಹಿಂದು ಹಿತ ರಕ್ಷಣಾ ವೇದಿಕೆ ಪದಾಧಿಕಾರಿಗಳು ತಡೆದು 12 ಗಿರಿ ತಳಿಯ ಹಸುಗಳನ್ನು ರಕ್ಷಿಸಿದ್ದಾರೆ.

ಹಿಂದು ಹಿತ ರಕ್ಷಣಾ ವೇದಿಕೆಯ ಶಿವು ಮಾತನಾಡಿ, ಬುಧವಾರ ರಾತ್ರಿ 2ರ ಸಮಯದಲ್ಲಿ ಕೆಎ-46-2575 ನಂಬರ್‌ನ ಪಿಕ್‌ಅಪ್ ವಾಹನದಲ್ಲಿ ಅಕ್ರಮವಾಗಿ ಹಸುಗಳನ್ನು ಸಾಗಿಸುತ್ತಿದ್ದಾರೆಂಬ ಮಾಹಿತಿಯನ್ನು ನಗರ ಪೊಲೀಸರಿಗೆ ನೀಡಿದ್ದೆವು. ಪೊಲೀಸರು ದೋಣಿಗಲ್ ಸಮೀಪದ ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನವನ್ನು ತಡೆದು 12 ಹಸು ರಕ್ಷಿಸಲಾಗಿದೆ. ಚಾಲಕ ತಪ್ಪಿಸಿಕೊಂಡಿದ್ದಾನೆ ಎಂದರು.



ಎಲ್ಲಾ ಹಸುಗಳು ಗಿರಿ ತಳಿಯವುಗಳಾಗಿದ್ದು, ಆರೋಗ್ಯವಾಗಿವೆ. ಅವುಗಳ ಕಿವಿಯಲ್ಲಿ ಗುರುತು ಚಿಹ್ನೆ (ಟ್ಯಾಗ್) ಇತ್ತು. ಗೋವುಗಳನ್ನು ನಿಲ್ಲಲು ಅಥವಾ ಕೂರಲು ಆಗದ ರೀತಿಯಲ್ಲಿ ತುಂಬಿ ಸಾಗಿಸಲಾಗುತ್ತಿತ್ತು. ಕಳೆದ ತಿಂಗಳು ಕಾರಿನಲ್ಲಿ ನಾಲ್ಕು ಹಸುಗಳನ್ನು ಕಳ್ಳ ಸಾಗಣೆ ಮಾಡುತ್ತಿದ್ದವರನ್ನು ಪೊಲೀಸರ ಸಹಕಾರದಿಂದ ಪತ್ತೆಹಚ್ಚಿದ್ದೇವೆ ಎಂದರು.

ರಾಷ್ಟ್ರೀಯ ಹೆದ್ದಾರಿಯ ಮೂಲಕ ಸಕಲೇಶಪುರದಿಂದ ಕೇರಳ ಹಾಗೂ ಮಂಗಳೂರು ಭಾಗಗಳಿಗೆ ಗೋ ಕಳ್ಳ ಸಾಗಣೆ ನಿರಂತರವಾಗಿ ನಡೆಯುತ್ತಿದೆ. ಆದರೆ ಈ ಕುರಿತು ಪೊಲೀಸರು ಗಂಭೀರವಾಗಿ ತನಿಖೆ ನಡೆಸುತ್ತಿಲ್ಲ. ಹಿಂದಿನ ಪ್ರಕರಣಗಳಲ್ಲಿಯೂ ಆರೋಪಿಗಳು ಜಾಮೀನು ಪಡೆದು ಬಿಡುಗಡೆಯಾಗಿರುವುದರಿಂದ ಕಳ್ಳ ಸಾಗಣೆಗಾರರಿಗೆ ಯಾವುದೇ ಭಯವಿಲ್ಲದಂತಾಗಿದೆ ಎಂದು ಆರೋಪಿಸಿದರು.

ವಶಕ್ಕೆ ಪಡೆದಿರುವ ಗೋವುಗಳನ್ನು ಅರಸೀಕೆರೆ ತಾಲೂಕಿನ ಬಾಣಾವರದಲ್ಲಿರುವ ಗೋಶಾಲೆಗೆ ಬಿಡಲಾಯಿತು.

# ನಾಳೆಯಿಂದ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಬೆಂಗಳೂರು: ಜೀ ಕನ್ನಡದ ಜನಪ್ರಿಯ ರಿಯಾಲಿಟಿ ಶೋ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ನ. 15 ರಿಂದ ಪ್ರಸಾರವಾಗಲಿದೆ.

ಹೊಸ ಥೀಮ್, ಅದ್ಭುತ ಪ್ರತಿಭೆಗಳ ಪ್ರದರ್ಶನಗಳೊಂದಿಗೆ ಈ ಬಾರಿಯ ಶೋ ಮತ್ತಷ್ಟು ಮನರಂಜನೆ ನೀಡಲು ಸಜ್ಜಾಗಿದೆ. ನ. 15 ರಿಂದ ಪ್ರತಿ ಶನಿವಾರ ಮತ್ತು ಭಾನುವಾರ ಸಂಜೆ 7.30ಕ್ಕೆ ಪ್ರಸಾರವಾಗಲಿದೆ. ಖ್ಯಾತ ನಿರೂಪಕಿ ಅನುಶ್ರೀ ಈ ಸೀಸನ್‌ನ ಆಂಕರ್ ಆಗಿರಲಿದ್ದು, ನಟರಾದ ಡಾ. ಶಿವರಾಜಕುಮಾರ್, ರಚಿತಾರಾಮ್, ಚಿನ್ನಾರಿ ಮುತ್ತ ವಿಜಯ ರಾಘವೇಂದ್ರ, ಮತ್ತು ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ತೀರ್ಪುಗಾರರಾಗಿ ಕಾರ್ಯ ನಿರ್ವಹಿಸಲಿದ್ದಾರೆ. ಈ ಸೀಸನ್‌ನಲ್ಲಿ ಜನಪ್ರಿಯ ಸೆಲೆಬ್ರಿಟಿಗಳು ರಾಜ್ಯದಾದ್ಯಂತ ಆಯ್ಕೆಯಾದ ಪ್ರತಿಭಾವಂತ ನೃತ್ಯಗಾರರೊಂದಿಗೆ ಜೋಡಿಯಾಗಿ ಪಾಲ್ಗೊಳ್ಳಲಿದ್ದಾರೆ. ಸೆಲೆಬ್ರಿಟಿಗಳ ಸಾಲಿನಲ್ಲಿ ಧನಂಜಯ್, ಭವ್ಯಾ ಗೌಡ, ಆರತಿ ಪಡುಬಿದ್ರಿ, ಅಮೋಘ್, ಪ್ರತೀಕ್ಷಾ, ನಂದಿನಿ, ಅನೂಪ್, ಸ್ಮೈಲ್ ಗುರು ರಕ್ಷಿತ್, ಜಗಪ್ಪ, ಅನನ್ಯ, ಪೂಜಾ ರಮೇಶ್ ಮತ್ತು ಅಶ್ವಿನ್ ಇರಲಿದ್ದಾರೆ. ಮೊದಲ ಎಪಿಸೋಡ್‌ನಲ್ಲಿ ಸೆಲೆಬ್ರಿಟಿ ಡ್ಯಾನ್ಸರ್‌ಗಳು ಇರಲಿದ್ದು, ಕರ್ನಾಟಕದ ವಿವಿಧ ಭಾಗಗಳಲ್ಲಿ ನಡೆದ ಆಡಿಷನ್‌ನಲ್ಲಿ ಆಯ್ಕೆಯಾದ ಡ್ಯಾನ್ಸರ್‌ಗಳು ಮುಂಬರಲಿರುವ ಎಪಿಸೋಡ್‌ಗಳಲ್ಲಿ ಜೋಡಿಯಾಗಲಿದ್ದಾರೆ.

# ಜಿಲ್ಲೆಯ ಪುರಸಭೆಗಳಿಗೆ ಮೀಸಲಾತಿ ಪ್ರಕಟ

## ಚುನಾವಣೆ ಪ್ರಕ್ರಿಯೆ ಆರಂಭ | ರಾಜಕೀಯ ಚಟುವಟಿಕೆ ಬಿರುಸು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಚನ್ನರಾಯಪಟ್ಟಣ, ಸಕಲೇಶಪುರ ಪುರಸಭೆ ಚುನಾಯಿತ ಸದಸ್ಯರ ಅಧಿಕಾರಾವಧಿ ಮುಕ್ತಾಯಗೊಳ್ಳುತ್ತಿದ್ದಂತೆ ಮೀಸಲಾತಿ ಅಧಿಸೂಚನೆ ಪ್ರಕಟವಾಗಿದ್ದು ರಾಜಕೀಯ ಚಟುವಟಿಕೆಗಳು ಬಿರುಸುಗೊಂಡಿವೆ.

ತಲಾ 23 ವಾರ್ಡ್‌ಗಳನ್ನು ಹೊಂದಿರುವ ಚನ್ನರಾಯಪಟ್ಟಣ ಹಾಗೂ ಸಕಲೇಶಪುರ ಪುರಸಭೆಯ ಹಿಂದಿನ ಚುನಾಯಿತ ಸದಸ್ಯರ ಅಧಿಕಾರಾವಧಿ ಮುಕ್ತಾಯಗೊಂಡ ಹಿನ್ನೆಲೆ ನಗರಾಭಿವೃದ್ಧಿ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಟಿ.ಮಂಜುನಾಥ ಅವರು, 2011ರ ಜನಗಣತಿಯನ್ನಾಧರಿಸಿ ವಾರ್ಡ್‌ವಾರು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಸಾಮಾನ್ಯ ಸ್ಥಾನವನ್ನು ಆಯಾ ವರ್ಗದ ಮಹಿಳೆಯರ ಸ್ಥಾನವನ್ನು ಅನುಬಂಧ ಕಲಂ-3ರಲ್ಲಿ ಮೀಸಲಾತಿ ನಿಗದಿಪಡಿಸಿ, ರಾಜ್ಯಪಾಲರ ಅಜ್ಞಾನುಸಾರ ಕರ್ನಾಟಕ ರಾಜ್ಯಪತ್ರ ಹೊರಡಿಸಿದ್ದಾರೆ.

ನಿಗದಿಪಡಿಸಿರುವ ಮೀಸಲಾತಿ ಬಗ್ಗೆ ಯಾವುದೇ ಸಲಹೆ-ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿದೆ. ಸಾರ್ವಜನಿಕ ಆಕ್ಷೇಪಣೆಗಳು ಇದ್ದಲ್ಲಿ ನ.17ರ ಒಳಗೆ ಲಿಖಿತ ರೂಪದಲ್ಲಿ, ಕಾರಣ ಸಹಿತವಾಗಿ ದಾಖಲೆಗಳೊಂದಿಗೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರಿಗೆ ಸಲ್ಲಿಸಲು ಸೂಚಿಸಲಾಗಿದೆ.

**ಸ್ಥಾನಪಲ್ಲಟ-ಕೆಲವರಿಗೆ ನಿರಾಸೆ**

ಸಕಲೇಶಪುರ, ಚನ್ನರಾಯಪಟ್ಟಣ ಎರಡು ಪುರಸಭೆ ವ್ಯಾಪ್ತಿಯಲ್ಲೂ ಕಳೆದ ಬಾರಿ ಇದ್ದ ಮೀಸಲಾತಿ ಈ ಬಾರಿ ಬದಲಾವಣೆಯಾಗಿರುವುದರಿಂದ ಹಾಲಿ ಸದಸ್ಯರು ಅವಕಾಶ ಕೈತಪ್ಪಿದಂತಾಗಿದೆ. ಹೀಗಾಗಿ ಸಾಕಷ್ಟು ಸ್ಥಾನಪಲ್ಲಟವಾಗುವ ಸಾಧ್ಯತೆ ಇದೆ. ಈಗಾಗಲೇ ಚುನಾವಣೆಗೆ ಸಿದ್ಧತೆ ಮಾಡಿಕೊಳ್ಳುತ್ತಿದ್ದ ಆಕಾಂಕ್ಷಿಗಳಿಗೆ ಮೀಸಲಾತಿ ಬದಲಾವಣೆ ನಿರಾಸೆ ಮೂಡಿಸಿದೆ. ಕೆಲ ವಾರ್ಡ್‌ಗಳಲ್ಲಿ




ಈ ಹಿಂದೆ ಇದ್ದ ಮೀಸಲಾತಿಯೇ ಮುಂದುವರಿದಿರುವುದರಿಂದ ಕೆಲವರಿಗಷ್ಟೇ ಆತಂಕ ಇಲ್ಲದಂತಾಗಿದೆ. ಇನ್ನು ಮೀಸಲಾತಿ ಬದಲಾಗಿರುವ ಕಾರಣ ಆಕಾಂಕ್ಷಿಗಳು ಈ ಬಾರಿ ಯಾವ ವಾರ್ಡ್‌ನಿಂದ ಸ್ಪರ್ಧೆ ಮಾಡಿದರೆ ಗೆಲುವು ಸುಲಭವಾಗಲಿದೆ, ಚುನಾವಣೆಗೆ ಸ್ಪರ್ಧಿಸಲು ಯಾವ ವಾರ್ಡ್ ಸುರಕ್ಷಿತ ಎಂದು ಹುಡುಕಾಟ ಪ್ರಾರಂಭಿಸಿದ್ದಾರೆ.

ಹೊಸ ಮೀಸಲಾತಿ ಪ್ರಕಟವಾಗುತ್ತಿದ್ದಂತೆ ಆಕಾಂಕ್ಷಿಗಳ ಸಂಖ್ಯೆ ಹೆಚ್ಚಾಗುತ್ತಿದೆ. ಜೆಡಿಎಸ್, ಬಿಜೆಪಿ, ಕಾಂಗ್ರೆಸ್ ಮೂರು ಪಕ್ಷದಲ್ಲೂ ಹೊಸ ಹೊಸ ಆಕಾಂಕ್ಷಿಗಳು ಹುಟ್ಟಿಕೊಂಡಿದ್ದು, ಚುನಾವಣಾ ದಿನಾಂಕ ಘೋಷಣೆಗಾಗಿ ಕಾಯುತ್ತಿದ್ದಾರೆ. ಅಲ್ಲದೇ ಟಿಕೆಟ್ ಪಡೆದುಕೊಳ್ಳಲು ಈಗಿನಿಂದಲೇ ಕಸರತ್ತು ನಡೆಸುತ್ತಿದ್ದಾರೆ. ಜೆಡಿಎಸ್-ಬಿಜೆಪಿ ಮೈತ್ರಿ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲೂ ಮುಂದುವರೆಯುವುದರಿಂದ ಅವಕಾಶಕ್ಕಾಗಿ ತಮ್ಮ ಪ್ರಭಾವ ಹೆಚ್ಚಿಸಿಕೊಳ್ಳಲು ಈಗಿನಿಂದಲೇ ಕಸರತ್ತು ನಡೆಸಲು ಮುಂದಾಗಿದ್ದಾರೆ. ಮೀಸಲಾತಿ ಅಂತಿಮಗೊಂಡು, ಚುನಾವಣೆ ಘೋಷಣೆಯಾದ ಬಳಿಕ ರಾಜಕೀಯ ತಂತ್ರಗಾರಿಕೆ, ಟಿಕೆಟ್ ಪಡೆಯಲು ಕಸರತ್ತು ಜೋರಾಗಲಿದೆ.

**ಚನ್ನರಾಯಪಟ್ಟಣ ಪುರಸಭೆ ಮೀಸಲಾತಿ ನಿಗದಿ**

ವಾರ್ಡ್ 1-ಹಿಂದುಳಿದ ವರ್ಗ (ಎ) ಮಹಿಳೆ, 2-ಪರಿಶಿಷ್ಟ ಜಾತಿ, 3-ಸಾಮಾನ್ಯ, 4-ಸಾಮಾನ್ಯ, 5-ಪರಿಶಿಷ್ಟ ಜಾತಿ, 6-ಹಿಂದುಳಿದ ವರ್ಗ (ಎ), 7- ಸಾಮಾನ್ಯ ಮಹಿಳೆ, 8-ಪರಿಶಿಷ್ಟ ಪಂಗಡ, 9-ಪರಿಶಿಷ್ಟ ಜಾತಿ ಮಹಿಳೆ, 10- ಹಿಂದುಳಿದ ವರ್ಗ (ಬಿ),11-ಹಿಂದುಳಿದ ವರ್ಗ (ಎ) ಮಹಿಳೆ, 12-ಸಾಮಾನ್ಯ, 13-ಸಾಮಾನ್ಯ, 14-ಹಿಂದುಳಿದ ವರ್ಗ (ಎ), 15- ಸಾಮಾನ್ಯ ಮಹಿಳೆ, 16-ಹಿಂದುಳಿದ ವರ್ಗ (ಎ) ಮಹಿಳೆ, 17-ಸಾಮಾನ್ಯ, 18-ಸಾಮಾನ್ಯ, 19-ಹಿಂದುಳಿದ ವರ್ಗ (ಎ), 20- ಸಾಮಾನ್ಯ ಮಹಿಳೆ, 21-ಸಾಮಾನ್ಯ ಮಹಿಳೆ, 22-ಸಾಮಾನ್ಯ ಮಹಿಳೆ, 23-ಸಾಮಾನ್ಯ ಮಹಿಳೆಗೆ ಮೀಸಲಾತಿ ನಿಗದಿ ಮಾಡಲಾಗಿದೆ.

**ಸಕಲೇಶಪುರ ಪುರಸಭೆ**

ವಾರ್ಡ್ 1-ಸಾಮಾನ್ಯ, 2-ಸಾಮಾನ್ಯ, 3-ಪರಿಶಿಷ್ಟ ಜಾತಿ ಮಹಿಳೆ, 4 -ಹಿಂದುಳಿದ ವರ್ಗ (ಬಿ), 5- ಸಾಮಾನ್ಯ ಮಹಿಳೆ, 6- ಹಿಂದುಳಿದ ವರ್ಗ (ಎ), 7-ಸಾಮಾನ್ಯ, 8-ಸಾಮಾನ್ಯ, 9 -ಹಿಂದುಳಿದ ವರ್ಗ (ಎ), 10- ಸಾಮಾನ್ಯ ಮಹಿಳೆ, 11-ಹಿಂದುಳಿದ ವರ್ಗ (ಎ) ಮಹಿಳೆ, 12-ಪರಿಶಿಷ್ಟ ಜಾತಿ, 13-ಸಾಮಾನ್ಯ, 14-ಸಾಮಾನ್ಯ, 15-ಪರಿಶಿಷ್ಟ ಪಂಗಡ, 16-ಸಾಮಾನ್ಯ ಮಹಿಳೆ, 17 -ಹಿಂದುಳಿದ ವರ್ಗ (ಎ) ಮಹಿಳೆ, 18- ಸಾಮಾನ್ಯ ಮಹಿಳೆ, 19-ಹಿಂದುಳಿದ ವರ್ಗ (ಎ) ಮಹಿಳೆ, 20-ಹಿಂದುಳಿದ ವರ್ಗ (ಎ), 21- ಸಾಮಾನ್ಯ ಮಹಿಳೆ, 21-ಸಾಮಾನ್ಯ ಮಹಿಳೆ, 23-ಪರಿಶಿಷ್ಟ ಜಾತಿಗೆ ನಿಗದಿ ಮಾಡಲಾಗಿದೆ.

# ನುಡಿಗಾಗಿ ಮೊದಲು ಧ್ವನಿ ಎತ್ತಿದ್ದೇ ಉತ್ತರ ಕರ್ನಾಟಕದವರು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಕನ್ನಡ ನಾಡು ನುಡಿಗಾಗಿ ಉತ್ತರ ಕರ್ನಾಟಕದವರು ಮೊದಲು ಧ್ವನಿ ಎತ್ತಿದರು. ಆ ನಂತರ ದಕ್ಷಿಣ ಕರ್ನಾಟಕದವರ ಹೋರಾಟ ಪ್ರಾರಂಭವಾಯಿತು ಎಂದು ಉದಯಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕನ್ನಡ ವಿಭಾಗ ಮುಖ್ಯಸ್ಥ ಡಾ. ಎಂ.ಕೆ. ಮಹೇಶ್ ಹೇಳಿದರು.

ಕಾಲೇಜಿನ ಕನ್ನಡ ವಿಭಾಗ ಅನಿಕೇತನ ವೇದಿಕೆ ಹಾಗೂ ಐಕ್ಯೂಎಸಿ ವತಿಯಿಂದ ಹಮ್ಮಿಕೊಂಡಿದ್ದ ಕನ್ನಡ ರಾಜ್ಯೋತ್ಸವ, ಕನ್ನಡ ಚಲನ ಚಿತ್ರಗೀತೆಗಳ ಗಾಯನ ಸ್ಪರ್ಧೆ ಉದ್ಘಾಟಿಸಿ ಮಾತನಾಡಿ, ಕನ್ನಡ ಭಾಷೆ ಮತ್ತು ಸಾಹಿತ್ಯಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ. ಕನ್ನಡದಲ್ಲಿ ನಾವು ಮಾತನಾಡುವಾಗ ಅನುಭವಿಸುವ ಸುಖವೇ ಬೇರೆ. ಆದರೆ ಇತ್ತೀಚೆಗೆ ಅನ್ಯ ಭಾಷಿಕರ ಹಾವಳಿಯಿಂದ ಕನ್ನಡ ಭಾಷೆಗೆ ಕುತ್ತು ಬರುತ್ತಿದೆ.

ನಮ್ಮ ಭಾಷಾತನವನ್ನು ಕಾಯ್ದುಕೊಳ್ಳಬೇಕಾದರೆ ಹೊರ ರಾಜ್ಯದಿಂದ ಬರುವವರಿಗೆ ಮೊದಲು ಕನ್ನಡ ಕಲಿಸಲು ಪ್ರಾರಂಭಿಸಬೇಕು. ಅವರ ಭಾಷೆಯನ್ನು ಕಲಿಯುವ ಉತ್ಸಾಹ ತೋರಬಾರದು. ಕುವೆಂಪು ಅವರ ನಾಡಗೀತೆ ನಮ್ಮ ಕನ್ನಡಕ್ಕೊಂದು ಚರಿತ್ರೆ. ಪಂಪನಂತಹ ಮಹನೀಯರು ಜಮಾನವ ಜಾತಿ ತಾನೊಂದೆ ವಲಂಬಿ ಎಂದು ವಿಶ್ವಕ್ಕೆ ಸಾರಿದ ಮನುಷ್ಯತ್ವದ ಕವಿ. ಆದ್ದರಿಂದ ಕನ್ನಡಿಗರ ದುರಭಿಮಾನ ತೊಲಗಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಪ್ರೊ. ಎಸ್.ಎಚ್. ಗಂಗೇಗೌಡ ಮಾತನಾಡಿ, ಮಾಸ್ತಿ, ಬೇಂದ್ರೆ, ಕಾರಂತ, ಲಂಕೇಶ್ ಅಂತವರ ಸಾಹಿತ್ಯ ನಮ್ಮ ಕನ್ನಡ ಸಾಹಿತ್ಯವನ್ನು ಈಗಲೂ ಜೀವಂತವಾಗಿರಿಸಿದೆ. ಕನ್ನಡ ಕಲಿಯುವುದು ತಪ್ಪಲ್ಲ, ಕನ್ನಡ ಬಳಸುವುದು ತಪ್ಪಲ್ಲ. ಕನ್ನಡವನ್ನು ಬೆಳಸುವ ನಾಟಕವಾಡುವುದು ತಪ್ಪು ಎಂದು ಹೇಳಿದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಕನ್ನಡ ವಿಭಾಗದ ಮುಖ್ಯಸ್ಥ ಜೆ.ಎಸ್. ಗುರುರಾಜ ಅವರು, ಕನ್ನಡದ ಅಸ್ಮಿತೆಯನ್ನು ಕಾಪಾಡಿಕೊಳ್ಳಲು ನಾವೆಲ್ಲ ಕನ್ನಡಿಗರಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ಪೂರ್ಣಿಮಾ, ಕನ್ನಡ ಉಪನ್ಯಾಸಕ ಹಳ್ಳಿವೆಂಕಟೇಶ್, ಡಿ.ಆರ್.ಚೆಲುವೇಗೌಡ, ಅಧೀಕ್ಷಕ ಕೃಷ್ಣ ಉಪಸ್ಥತರಿದ್ದರು. ಅಂತರ ಕಾಲೇಜಿನಿಂದ ಆಗಮಿಸಿದ್ದ ವಿದ್ಯಾರ್ಥಿಗಳು ನಾಡು ನುಡಿಯ ಚಿತ್ರಗೀತೆಗಳನ್ನು ಹಾಡಿದರು.

# ಸರ್ಕಾರಿ ಶಾಲೆಗಳ ಬಲವರ್ಧನೆ ಸರ್ಕಾರದ ಗ್ಯಾರಂಟಿಯಾಗಲಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯ ಸರ್ಕಾರ ಸರ್ಕಾರಿ ಶಾಲೆಗಳನ್ನು ಬಲವರ್ಧನೆಗೊಳಿಸುವ ಗ್ಯಾರಂಟಿ ಘೋಷಿಸಿ ಕನ್ನಡ ಉಳಿವಿಗೆ ಸಹಕರಿಸಬೇಕೆಂದು ಕದಂಬ ಸೈನ್ಯ ಕನ್ನಡ ಸಂಘಟನೆ ರಾಜ್ಯಾಧ್ಯಕ್ಷ ಕೆ.ಬೇಕ್ರಿ ರಮೇಶ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ರಾಜ್ಯದ ಬಹುತೇಕ ಶಾಲೆಗಳು ತ್ರಿಶಂಕು ಸ್ಥಿತಿಯಲ್ಲಿದ್ದು, ಗ್ರಾಮೀಣ ಭಾಗದ ಮಕ್ಕಳ ಕಲಿಕೆಗೆ ಭಾರೀ ತೊಡಕಾಗಿದೆ. ಜ್ಞಾನ ದೇಗುಲಗಳಿಗೆ ಅಗತ್ಯ ಸೌಕರ್ಯ ಕಲ್ಪಿಸುವುದು ಹಾಗು ಕನ್ನಡ ಭಾಷೆಗೆ ಆದ್ಯತೆ ನೀಡಿದರೆ ಕನ್ನಡವನ್ನು ಮತ್ತಷ್ಟು ಗಟ್ಟಿಯಾಗಿ ಕಟ್ಟಬಹುದು ಎಂದರು.

ರಾಜ್ಯದಲ್ಲಿ ದ್ವಿಭಾಷಾ ನೀತಿಯನ್ನು ಕಡ್ಡಾಯವಾಗಿ ಜಾರಿಗೊಳಿಸಬೇಕು. ಡಾ. ಸರೋಜಿನಿ ಮಹಿಷಿ ಪರಿಷ್ಕೃತ ವರದಿ ಜಾರಿ ಮಾಡಬೇಕು. ತಮಿಳುನಾಡಿನಂತೆ ಕರ್ನಾಟಕದಲ್ಲೂ ದ್ವಿಭಾಷಾ ನೀತಿಯನ್ನು ಕಡ್ಡಾಯಗೊಳಿಸಬೇಕು. ಹಿಂದಿ ಸಾಮ್ರಾಜ್ಯಶಾಹಿ ವ್ಯವಸ್ಥೆ ಕನ್ನಡಿಗರ ಉದ್ಯೋಗಾವಕಾಶ ಕಸಿದುಕೊಳ್ಳುತ್ತಿದೆ. ಕೇಂದ್ರ ಸರ್ಕಾರದ ಇಲಾಖೆಗಳಲ್ಲಿ ಹಿಂದಿ ಭಾಷಿಕರ ಪ್ರಾಬಲ್ಯ ಹೆಚ್ಚುತ್ತಿದೆ. 2017ರ ಡಾ. ಸರೋಜಿನಿ ಮಹಿಷಿ ಪರಿಷ್ಕೃತ ವರದಿಯನ್ನು ಜಾರಿಗೆ ತರದ ರಾಜ್ಯ ಸರ್ಕಾರ ಇನ್ನಾದರೂ ಇಚ್ಛಾಶಕ್ತಿ ತೋರಬೇಕು ಎಂದು ಹೇಳಿದರು.

ಬೆಳಗಾವಿಯಲ್ಲಿ ಕನ್ನಡ ವಿರೋಧಿ ಸಂಘಟನೆಗಳ ಕೃತ್ಯಕ್ಕೆ ಕಡಿವಾಣ ಹಾಕಬೇಕು. ವಲಸಿಗರ ಅಕ್ರಮ ಪಡಿತರ ಚೀಟಿಗಳನ್ನು ರದ್ದು ಮಾಡಿ, ಬಾಂಗ್ಲಾ ಮೂಲದ ವಲಸಿಗರನ್ನು ಹಿಂತಿರುಗಿಸಲು ಕಠಿಣ ಕ್ರಮ ಕೈಗೊಳ್ಳಬೇಕು. ಪರಭಾಷಿಕರ ದಬ್ಬಾಳಿಕೆಯಿಂದ ಮೂಲ ಕನ್ನಡಿಗರ ಉದ್ಯೋಗಕ್ಕೆ ಅಪಾಯ ಎದುರಾಗಿದೆ ಎಂದು ಆತಂಕ ವ್ಯಕ್ತಪಡಿಸಿದ ಅವರು, ರಾಜ್ಯಾದ್ಯಂತ ಕನ್ನಡ ನಾಮಫಲಕ ಕಡ್ಡಾಯ ಕಾನೂನನ್ನು ಕಠಿಣವಾಗಿ ಜಾರಿಗೆ ತರಬೇಕು, ಉಲ್ಲಂಘಿಸಿದ ವ್ಯಾಪಾರಿಗಳಿಗೆ ದಂಡ ವಿಧಿಸಬೇಕೆಂದರು.

ಕದಂಬ ಸೈನ್ಯ ಕನ್ನಡ ಸಂಘಟನೆ ಜಿಲ್ಲಾಧ್ಯಕ್ಷ ಎ.ಹೆಚ್. ಗಣೇಶ್, ರಾಜ್ಯ ಸಹ ಕಾರ್ಯದರ್ಶಿ ಉಮ್ಮಡಹಳ್ಳಿ ನಾಗೇಶ್, ಸಕಲೇಶಪುರ ಅಧ್ಯಕ್ಷ ವಿಶ್ವಾಸ್ ಡಿ. ಗೌಡ, ಹೊಳೆನರಸೀಪುರ ಅಧ್ಯಕ್ಷ ಪುಟ್ಟಸ್ವಾಮಿಗೌಡ, ಎ.ಜೆ. ಚಂದ್ರು ಹಾಜರಿದ್ದರು.

# ಸಮರ್ಥ ಆಡಳಿತಕ್ಕೆ ಹೆಸರಾದವರು ಚೆನ್ನಭೈರಾದೇವಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿಜಯನಗರ ಸಾಮ್ರಾಜ್ಯದ ಆಳ್ವಿಕೆಯಲ್ಲಿ ಅವರ ಸಾಮಂತ ರಾಣಿಯಾಗಿ ಕರಾವಳಿ ಪ್ರದೇಶಗಳಾದ ಕುಮುಟ, ಭಟ್ಕಳ, ಹೊನ್ನಾವರ ಹಾಗೂ ಗೋವಾ ಪ್ರದೇಶಗಳಲ್ಲಿ ಸಮರ್ಥ ಆಡಳಿತ ನೀಡಿದವರು ಕನ್ನಡದ ದಿಟ್ಟ ಮಹಿಳೆ ಚೆನ್ನಭೈರಾದೇವಿ ಎಂದು ನಾಟಕಕಾರ, ಸಾಹಿತಿ, ನಿರ್ದೇಶಕ ಡಾ. ಗಜಾನನ ಶರ್ಮ ಹೇಳಿದರು. ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಈಚೆಗೆ ಅಕ್ಷರ ಬುಕ್ ಹೌಸ್ ಹಾಗೂ ಅಕ್ಷರ ಅಕಾಡೆಮಿ ವತಿಯಿಂದ 10ನೇ ಸಂಚಿಕೆಯ ಬುಕ್ ಮಾತು ಕಾರ್ಯಕ್ರಮದಲ್ಲಿ ಕಾದಂಬರಿ ಚೆನ್ನಭೈರಾದೇವಿ ಕುರಿತ ಸಂವಾದದಲ್ಲಿ ಮಾತನಾಡಿದ ಅವರು, 54 ವರ್ಷ ಆಡುವಳ್ಳಿ, ಗೇರುಸೊಪ್ಪ ಸಾಮ್ರಾಜ್ಯದ ರಾಣಿಯಾಗಿ ಮೆರೆದ ಚೆನ್ನಭೈರಾದೇವಿ ಕುರಿತು, ತಮ್ಮ ಸಂಶೋಧನೆ, ಸತ್ಯಸಂಗತಿಗಳ ಹುಡುಕಾಟ, ನಿರಂತರ ಅಧ್ಯಯನದಿಂದ, ಐತಿಹ್ಯದಲ್ಲಿ ಕ್ಷುಲಕ ಕಾರಣಗಳಿಂದ ಮರೆಯಾಗಿದ್ದ, ಕನ್ನಡದ ಹೆಣ್ಣುಮಗಳ ಯಶೋಗಾಥೆಯೇ ಈ ಚೆನ್ನಭೈರಾದೇವಿ ಕಾದಂಬರಿ ಎಂಬುದಾಗಿ. ಯೂರೋಪ್ ರಾಷ್ಟಗಳಿಗೆ ನಮ್ಮ ನೆಲದಿಂದ ಸಾಂಬಾರ ಪದಾರ್ಥಗಳನ್ನು ರಫ್ತು ಮಾಡಿ ಮಾರುಕಟ್ಟೆಯನ್ನು ವಿಸ್ತರಿಸಿ, ಆರ್ಥಿಕ ಸ್ಥಿತಿಯನ್ನು ಉತ್ತಮಪಡಿಸಿ, ಸರ್ವಧರ್ಮ ಸಮನ್ವಯತೆ, ಸಹಬಾಳ್ವೆ, ಮಹಿಳಾ ಸ್ವರಕ್ಷಣೆಗೆ ಕಾರಣ ಚೆನ್ನಭೈರಾದೇವಿ. ಚೆನ್ನಭೈರಾದೇವಿ ಪಾಠವನ್ನು 9ನೇ ತರಗತಿಯ ಕನ್ನಡ ಭಾಷಾ ಅಧ್ಯಯನದಲ್ಲಿ ಪೂರಕ ವಿಷಯವಾಗಿ ಇಟ್ಟಿರುವುದು ಬೇಸರದ ಸಂಗತಿ ಎಂಬ ಶಿಕ್ಷಕರ ಕಳವಳಕ್ಕೆ, ಪೂರಕ ವಿಷಯವಾಗಲಿ, ಅಧ್ಯಯನದ ವಿಷಯವಾಗಲಿ ಕಲಿಕೆ ಮುಖ್ಯ ಎಂದು ಸಂವಾದದಲ್ಲಿ ತಿಳಿಸಿದರು.

ಅಕ್ಷರ ಬುಕ್ ಹೌಸ್ ಸಂಸ್ಥಾಪಕ ಬಿ.ಕೆ. ಗಂಗಾಧರ್ ಮಾತನಾಡಿ, ಸರ್ ಮಿರ್ಜಾ ಇಸ್ಮಾಯಿಲ್‌ಅವರ ದೂರದೃಷ್ಟಿ ಬೆಂಗಳೂರು-ಮೈಸೂರು ಬೆಳವಣಿಗೆಯಲ್ಲಿ ಪ್ರಮುಖವಾಗಿದೆ. ಕನ್ನಡ ರಾಜ್ಯೋತ್ಸವದ ವಿಶೇಷ ಸಂಚಿಕೆಯ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು, ಸಹೃದಯ ಓದುಗರೊಂದಿಗೆ ಸಂವಾದ ನಡೆಸಿದ್ದು, ಅತೀವ ಸಂತೋಷವನ್ನು ನೀಡಿದೆ ಎಂದರು.ಗಜಾನನ ಶರ್ಮ ಅವರು ರಚಿಸಿದ ಈ ಗೀತೆಯನ್ನು ಧಾತ್ರಿ ಹಾಡಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಬಿ.ಆರ್. ಬೊಮ್ಮೇಗೌಡ, ರೋಟರಿ ವಲಯ 9ರ ವಲಯ ಸೇನಾನಿ ಮಮತಾ, ಬುಕ್ ಮಾತು ಸದಸ್ಯರಾದ ಸುಜಾತ ಸಿದ್ಧರಾಜು, ಅರ್ಜುನ್ ಹಾಜರಿದ್ದರು.

# ನುಗ್ಗೇಹಳ್ಳಿಯಲ್ಲಿ ಸಾರ್ವಜನಿಕ ಶೌಚಾಲಯ ಉದ್ಘಾಟನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಸಾರ್ವಜನಿಕರ ಹಲವು ವರ್ಷಗಳ ಒತ್ತಾಯದಂತೆ ಗ್ರಾಮ ಪಂಚಾಯಿತಿ ಹಾಗೂ ವಿವಿಧ ಅನುದಾನದಡಿ 8 ಲಕ್ಷ ರೂ. ವೆಚ್ಚದಲ್ಲಿ ಸಾರ್ವಜನಿಕ ಶೌಚಾಲಯ ನಿರ್ಮಾಣ ಮಾಡಲಾಗಿದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ತಾಲೂಕಿನ ನುಗ್ಗೆಹಳ್ಳಿ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ವತಿಯಿಂದ ನಿರ್ಮಿಸಿರುವ ಸಾರ್ವಜನಿಕ ಶೌಚಾಲಯ ಉದ್ಘಾಟಿಸಿ ಮಾತನಾಡಿ, ಗ್ರಾ.ಪಂ. 15ನೇ ಹಣಕಾಸಿನ ಯೋಜನೆಯಡಿ 5 ಲಕ್ಷ ರೂ. ಹಾಗೂ ಜಿಲ್ಲಾ ಪಂಚಾಯಿತಿಯ 3 ಲಕ್ಷ ರೂ. ಅನುದಾನ ಬಳಸಿ ಸುಸಜ್ಜಿತ ಸಾರ್ವಜನಿಕ ಶೌಚಾಲಯವನ್ನು ನಿರ್ಮಾಣ ಮಾಡಲಾಗಿದೆ ಎಂದರು.

ಹೋಬಳಿ ಕೇಂದ್ರದಲ್ಲಿ ದಿನನಿತ್ಯ ತಾಲೂಕು ಕೇಂದ್ರ ಸೇರಿದಂತೆ ಅನೇಕ ಮಾರ್ಗಗಳಿಂದ ಹತ್ತಾರು ಬಸ್ ಹಾಗೂ ಖಾಸಗಿ ವಾಹನಗಳು ಸಂಚಾರ ನಡೆಸಲಿದ್ದು ಜೊತೆಗೆ ಆಸ್ಪತ್ರೆಗೆ ಹೆಚ್ಚಿನ ಸಂಖ್ಯೆಯಲ್ಲಿ ರೋಗಿಗಳು ಬರುವುದರಿಂದ ಈ ಹಿಂದೆ ಶೌಚಾಲಯವಿಲ್ಲದೆ ಮಹಿಳೆಯರಿಗೆ ಮತ್ತು ರೋಗಿಗಳಿಗೆ ಹೆಚ್ಚು ತೊಂದರೆ ಆಗುತ್ತಿತ್ತು. ಈ ಹಿನ್ನೆಲೆಯಲ್ಲಿ ಶೌಚಾಲಯ ನಿರ್ಮಾಣ ಮಾಡಲಾಗಿದೆ. ಇದರಿಂದ ಜನರಿಗೆ ಹೆಚ್ಚು ಅನುಕೂಲವಾಗಿದೆ ಎಂದು ತಿಳಿಸಿದರು.

# ಅನ್ನ ಸುವಿಧಾ ಯೋಜನೆ ಪ್ರಯೋಜನಕ್ಕೆ ಸಲಹೆ



ಆಲೂರು: ಅನ್ನ ಸುವಿಧಾ ಯೋಜನೆ ನ. 1ರಿಂದ ರಾಜ್ಯಾದ್ಯಂತ ಜಾರಿಗೆ ಬಂದಿದ್ದು, 75 ವರ್ಷ ಮೇಲ್ಪಟ್ಟ ಏಕ ಸದಸ್ಯ ಕಾರ್ಡ್‌ಗಳಿಗೆ ಯೋಜನೆ ಅನ್ವಯಗೊಳಿಸಲಾಗಿದೆಯೆಂದು ತಹಶೀಲ್ದಾರ್ ಮಲ್ಲಿಕಾರ್ಜುನ್ ಅವರು ತಿಳಿಸಿದ್ದಾರೆ. ತಾಲ್ಲೂಕಿನಲ್ಲಿ 75 ವರ್ಷ ಮೇಲ್ಪಟ್ಟ ಏಕ ಸದಸ್ಯರಿರುವ ಪಡಿತರ ಚೀಟಿದಾರರ ಮನೆ ಬಾಗಿಲಿಗೆ ಪಡಿತರ ವಿತರಣೆ ಮಾಡಲಾಗುತ್ತಿದೆ. ನ್ಯಾಯಬೆಲೆ ಅಂಗಡಿಯ ಲಾಗಿನ್‌ನಲ್ಲಿ ಅನ್ನ ಸುವಿಧಾ ಯೋಜನೆಗೆ ಒಳಪಡುವ ಅರ್ಹ ಕಾರ್ಡ್‌ಗಳನ್ನು ಸೇರಿಸಲಾಗಿದೆ. ಅವರಿಗೆ ಪಡಿತರ ನೀಡುವ ದಿನಾಂಕವನ್ನು ನಿಗದಿ ಪಡಿಸಲಾಗಿದೆ. ಪ್ರತಿ ತಿಂಗಳ ಕೊನೆಯಲ್ಲಿ 30, 31ನೇ ದಿನಾಂಕದಂದು ಅರ್ಹ ಫಲಾನುಭವಿಗಳ ಮೊಬೈಲ್‌ಗೆ ಸಂದೇಶ ಕಳುಹಿಸಲಾಗುವುದು. ತಿಂಗಳ 1 ರಿಂದ 5ರ ಒಳಗೆ ಫಲಾನುಭವಿಗಳು ನೋಂದಣಿ ಮಾಡಿಕೊಳ್ಳಬೇಕು. ಈ ಯೋಜನೆ ಸದುಪಯೋಗ ಪಡಿಸಿಕೊಳ್ಳಬೇಕೆಂದು ತಿಳಿಸಿದ್ದಾರೆ.

# ಇತಿಹಾಸದಲ್ಲಿ ಈ ದಿನ

## ನವೆಂಬರ್-14

1889: ಭಾರತದ ಮೊದಲ ಪ್ರಧಾನಿ ಪಂಡಿತ ಜವಾಹರಲಾಲ್ ನೆಹರು ಅವರ ಜನನ. ಈ ದಿನವನ್ನು ಭಾರತದಲ್ಲಿ ಮಕ್ಕಳ ದಿನಾಚರಣೆಯಾಗಿ ಆಚರಿಸಲಾಗುತ್ತದೆ.

1922: ಬ್ರಿಟನ್‌ನಲ್ಲಿ ಬಿಬಿಸಿ ರೇಡಿಯೋ ಪ್ರಸಾರ ಸೇವೆ ಆರಂಭವಾಯಿತು.

1969: ಅಮೆರಿಕದ ಅಪೊಲೊ 12 ಬಾಹ್ಯಾಕಾಶ ನೌಕೆ ಯಶಸ್ವಿಯಾಗಿ ಚಂದ್ರನತ್ತ ಪ್ರಯಾಣ ಆರಂಭಿಸಿತು.

1971: ನಾಸಾ ಸಂಸ್ಥೆಯ ಮ್ಯಾರಿನರ್ 9 ಗ್ರಹಾಂತರ್ ಯಾನ ಮಂಗಳ ಗ್ರಹದ ಪರಿಕ್ರಮಣಕ್ಕೆ ಯಶಸ್ವಿಯಾಗಿ ಪ್ರವೇಶಿಸಿತು.

1982: ಯೆಮನ್ ಮತ್ತು ಉತ್ತರ ಯೆಮನ್ ದೇಶಗಳು ಏಕೀಕೃತ ಯೆಮನ್ ರಾಷ್ಟ್ರದ ಸ್ಥಾಪನೆಯತ್ತ ಒಪ್ಪಂದ ಮಾಡಿಕೊಂಡವು.

**ಜನನ**

1891: ಫ್ರೆಡರಿಕ್ ಬ್ಯಾಂಟಿಂಗ್, ಇನ್ಸುಲಿನ್ ಕಂಡುಹಿಡಿದ ಕೆನಡಾದ ವಿಜ್ಞಾನಿ, ನೊಬೆಲ್ ಪ್ರಶಸ್ತಿ ಪುರಸ್ಕೃತ

1954: ಕನ್ನಡದ ಹಿರಿಯ ನಟ ಅಂಬರೀಶ್

**ಮರಣ**

2008: ಪ್ರಸಿದ್ಧ ಭಾರತೀಯ ಸಂಗೀತ ನಿರ್ದೇಶಕ ಮದನ್ ಮೋಹನ್

# ಹಾಸನದ ರೆಡ್ ಕ್ರಾಸ್ ಭವನದಲ್ಲಿ ವಿಸ್ಮಯ ಕೀಟ ಪ್ರದರ್ಶನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ರೆಡ್ ಕ್ರಾಸ್ ಭವನದಲ್ಲಿ ಪಕ್ಷಿ ಪ್ರೇಮಿ ಸಲೀಂ ಅಲಿ ಅವರ ಜನ್ಮ ದಿನಾಚರಣೆ ಅಂಗವಾಗಿ ಕಾರೆಕೆರೆ ಕೃಷಿ ಮಹಾವಿದ್ಯಾಲಯ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಜಿಲ್ಲಾ ಪಕ್ಷಿ ವೀಕ್ಷಕರ ಸಂಘದಿಂದ ಉಚಿತ ವಿಸ್ಮಯ ಕೀಟಗಳ ಪ್ರದರ್ಶನ ಹಾಗೂ ಕೀಟ ಮತ್ತು ಪಕ್ಷಿಗಳ ಛಾಯಾಚಿತ್ರ ಪ್ರದರ್ಶನ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯ ನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ ಮಾತನಾಡಿ, ಕೀಟ ಹಾಗೂ ಛಾಯಾಚಿತ್ರಗಳ ಪ್ರದರ್ಶನದಿಂದ ಜ್ಞಾನ ಸಂಪಾದನೆಯಾಗುತ್ತದೆ. ಬಹಳಷ್ಟು ಶ್ರಮ ಹಾಕಿ ಕೃಷಿ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ರೆಡ್ ಕ್ರಾಸ್ ಪದಾಧಿಕಾರಿಗಳು ಅತ್ಯುತ್ತಮ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ ಎಂದರು.

ಪ್ರೊ. ಟಿ.ಸಿ. ತಾರಾನಾಥ್ ಮಾತನಾಡಿ, ಜೀವ ವೈವಿಧ್ಯತೆಗೆ ಧಕ್ಕೆ ಒದಗಿರುವ ದಿನಗಳಲ್ಲಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕೆಲಸ ತುರ್ತಾಗಿ ಆಗಬೇಕು ಎಂದರು.

ಮಂಡ್ಯ ಕೃಷಿ ವಿಜ್ಞಾನಗಳ ವಿಶ್ವವಿದ್ಯಾನಿಲಯ ವಿಶೇಷಾಧಿಕಾರಿ ಡಾ. ಹರಿಣಿ ಕುಮಾರ್ ಮಾತನಾಡಿ, ಅತಿ ಉತ್ತಮ ಪ್ರದರ್ಶನವನ್ನು ಏರ್ಪಡಿಸಿದ್ದು ಕೃಷಿ ಕಾಲೇಜಿನ ವಿದ್ಯಾರ್ಥಿಗಳು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯವರ ಜೊತೆಗೂಡಿ ರಕ್ತದಾನ ಶಿಬಿರ ಏರ್ಪಡಿಸಬೇಕೆಂದು ಸಲಹೆ ನೀಡಿದರು. ಪತ್ರಕರ್ತ ಮಂಜುನಾಥ ದತ್ತ, ಪಕ್ಷಿ ವೀಕ್ಷಕರ ಸಂಘದ ಅಧ್ಯಕ್ಷ ಸುಬ್ಬಸ್ವಾಮಿ, ಚಿತ್ಕಲಾ ಫೌಂಡೇಶನ್ ಅಧ್ಯಕ್ಷ ಬಿ.ಎಸ್.ದೇಸಾಯಿ , ರೆಡ್ ಕ್ರಾಸ್ ಸಭಾಪತಿ ಹೆಮ್ಮಿಗೆ ಮೋಹನ್, ಕಾರ್ಯದರ್ಶಿ ಶಬ್ಬೀರ್ ಅಹ್ಮದ್, ಖಜಾಂಚಿ ಜಯೇಂದ್ರಕುಮಾರ್ ಹಾಜರಿದ್ದರು.

# ಬೇಲೂರು ಚನ್ನಕೇಶವ ದೇಗುಲಕ್ಕೆ ಬಿಗಿ ಭದ್ರತೆ

ಬೇಲೂರು: ದೆಹಲಿಯ ಕೆಂಪುಕೋಟೆ ಬಳಿ ಘಟಿಸಿದ ಬಾಂಬ್ ಸ್ಫೋಟ ಪ್ರಕರಣ ಬೆನ್ನಲ್ಲೇ ಪಟ್ಟಣದ ಐತಿಹಾಸಿಕ ಚನ್ನಕೇಶವ ದೇವಾಲಯದಲ್ಲಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ.

ದೇಗುಲ ಕಾರ್ಯನಿರ್ವಾಹಣಾಧಿಕಾರಿ ಯೋಗೇಶ್ ಮಾತನಾಡಿ, ಭದ್ರತೆ ವಿಚಾರವಾಗಿ ಹೆಚ್ಚುವರಿ ಸಿಬ್ಬಂದಿ ನಿಯೋಜಿಸಲಾಗಿದೆ. ಪೊಲೀಸರು ಕೂಡ ಇದ್ದಾರೆ. ಪ್ರತಿ ಪ್ರವಾಸಿಗರ ತಪಾಸಣೆ ನಡೆಸಲಾಗುತ್ತಿದೆ. ಪ್ರವಾಸಿಗರು ಒಂದೇ ದಾರಿಯಲ್ಲಿ ಸಾಗುವಂತೆ ಕ್ರಮ ವಹಿಸಲಾಗಿದೆ. ನೆಲಹಾಸು ಕೂಡ ಹಾಕಿಸಲಾಗುತ್ತದೆ. ಕುಡಿಯುವ ನೀರಿನ ವ್ಯವಸ್ಥೆ ಮಾಡಿಕೊಡುವಂತೆ ಮೇಲಧಿಕಾರಿಗಳಿಗೆ ಮನವಿ ಮಾಡಲಾಗಿದೆ. ಅಗತ್ಯ ಸುರಕ್ಷತಾ ಕ್ರಮ ಕೈಗೊಳ್ಳಲಾಗಿದೆ ಎಂದರು.



# ಮಾಜಿ ಸಚಿವ ಬಿ.ಶಿವರಾಂ ಹತಾಶರಾಗಿದ್ದಾರೆ: ಬಿಜೆಪಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಜಾವಗಲ್: ಸಚಿವರಾಗಿ, 4 ಬಾರಿ ಶಾಸಕರಾಗಿ ಕೆಲಸ ಮಾಡಿದ ಬಿ. ಶಿವರಾಂ ಅವರು ಇತ್ತೀಚೆಗೆ ಹತಾಶ ಮನೋಭಾವದಿಂದ ವರ್ತಿಸುತ್ತಿದ್ದು, ಸಂವಿಧಾನಾತ್ಮಕವಾಗಿ ಆಯ್ಕೆಯಾಗಿರುವ ಶಾಸಕ ಹೆಚ್.ಕೆ.ಸುರೇಶ್ ವಿರುದ್ಧ ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ ಎಂದು ಬೇಲೂರು ಬಿಜೆಪಿ ಮಂಡಲ ಪ್ರಧಾನ ಕಾರ್ಯದರ್ಶಿ ಮಸಾಲೆ ರಮೇಶ್ ಆರೋಪಿಸಿದರು.

ಜಾವಗಲ್‌ನ ಪ್ರವಾಸಿ ಮಂದಿರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜಕೀಯ ಅನುಭವವಿರುವ ಮಾಜಿ ಮಂತ್ರಿ ಬಿ.ಶಿವರಾಂ ಹಾಗೂ ಅವರ ಹಿಂಬಾಲಕರು ಸಣ್ಣ ಮಟ್ಟದ ರಾಜಕೀಯಕ್ಕೆ ಮುಂದಾಗಿದ್ದು, ಕ್ಷೇತ್ರದ ಅಭಿವೃದ್ಧಿಯನ್ನು ಮತ್ತಷ್ಟು ಕುಂಠಿತ ಮಾಡುವ ಕೆಲಸಕ್ಕೆ ಕೈಹಾಕಿದ್ದಾರೆ. ಬಿಜೆಪಿ ಅಧಿಕಾರದಲ್ಲಿ ಇಲ್ಲದಿದ್ದರೂ ಎಲ್ಲ ಸಚಿವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕ್ಷೇತ್ರದ ಸಮಗ್ರ ಅಭಿವೃದ್ಧಿಯ ಬಗ್ಗೆ ಚಿಂತನೆ ಮಾಡುವ ಶಾಸಕರ ಬಗ್ಗೆ ಶಿವರಾಂ ವ್ಯಂಗ್ಯವಾಗಿ ಮಾತನಾಡಿರುವುದು ಖಂಡನೀಯ.

127 ಕೋಟಿ ರೂ. ವೆಚ್ಚದ ವಿದ್ಯುತ್ ಸಬ್ ಸ್ಟೇಷನ್‌ಗಳನ್ನು ಮಾಡಿಸಿದ್ದು ತಾವು ಎಂದಿರುವ ಶಿವರಾಂ ಅವರು ಅದಕ್ಕೆ ದಾಖಲೆಗಳನ್ನು ಒದಗಿಸಬೇಕು. ಸಬ್ ಸ್ಟೇಷನ್ ಕೆಲಸ ಪ್ರಾರಂಭವಾಗಲು ಕಾರಣ ಯಾರೆಂಬುದನ್ನು ಮಾಜಿ ಸಚಿವರು ಗೊತ್ತಿಲ್ಲದವರಂತೆ ನಟಿಸುತ್ತಿದ್ದಾರೆ. ನಾಲ್ಕು ಬಾರಿ ಗಂಡಸಿ ಕ್ಷೇತ್ರದ ಶಾಸಕರಾಗಿ ಸಚಿವರಾಗಿ ಆಡಳಿತ ಮಾಡಿರುವ ಶಿವರಾಂ ಅವರ ಸಾಧನೆ ಕಲ್ಯಾಡಿಯಲ್ಲಿದ್ದ ಮೈನಿಂಗ್ ಅನ್ನು ಮುಚ್ಚಿಸಿ ಸ್ಥಳೀಯರ ಅನ್ನ ಕಿತ್ತುಕೊಂಡಿದ್ದು ಬಿಟ್ಟರೆ ಬೇರೇನೂ ಇಲ್ಲ ಎಂದು ದೂರಿದರು.

ಶಿವರಾಂ ಅವರನ್ನು ಕ್ಷೇತ್ರದ ಜನರು ತಿರಸ್ಕರಿಸಿದ್ದಾರೆ. 5ನೇ ಬಾರಿಗೆ ಯಾವ ಕ್ಷೇತ್ರ ಆಯ್ಕೆ ಮಾಡಿಕೊಳ್ಳುತ್ತಿರೋ ಗೊತ್ತಿಲ್ಲ ಎಂದು ನಿಮ್ಮ ಕಾರ್ಯಕರ್ತರೇ ಮಾತನಾಡಿಕೊಳ್ಳುತ್ತಿದ್ದಾರೆ. ಅದನ್ನು ಗಮನದಲ್ಲಿರಿಸಿಕೊಂಡು ರಾಜಕಾರಣ ಮಾಡಿದರೆ ಉತ್ತಮ ಎಂದು ಸಲಹೆ ನೀಡಿದರು.

ಜಾವಗಲ್‌ನಲ್ಲಿ ಭಾರೀ ಮಳೆಯಿಂದ ಮನೆಗೆ ನೀರು ನುಗ್ಗಿ ಅವಾಂತರ ಸೃಷ್ಟಿಯಾದಾಗ ಸಂತ್ರಸ್ತರ ಮನೆಗೆ ಭೇಟಿ ನೀಡಿ ಪರಿಹಾರ ಕ್ರಮ ಕೈಗೊಂಡೆ ಎಂದು ಸುಳ್ಳು ಹೇಳುತ್ತಾರೆ. ಸಂಬಂಧಪಟ್ಟ ಇಲಾಖೆಯ ಸಚಿವರೊಂದಿಗೆ ಪತ್ರ ವ್ಯವಹಾರ ಮಾಡಿ ಸುಮಾರು 5.5 ಕೋಟಿ ರೂ. ಅನುದಾನ ತಂದಿದ್ದು ಶಾಸಕ ಹೆಚ್.ಕೆ.ಸುರೇಶ್. ನಿಮ್ಮ ಕೊಡುಗೆ ಏನೆಂದು ದಾಖಲಾತಿ ಬಿಡುಗಡೆ ಮಾಡಿದರೆ ಸಾರ್ವಜನಿಕರಿಗೆ ತಿಳಿಯಲಿದೆ ಎಂದ ಅವರು ಕಾಂಗ್ರೆಸ್ ಸರ್ಕಾರದ ಬಿಟ್ಟಿ ಭಾಗ್ಯಗಳ ಬೇಲೂರು ತಾಲ್ಲೂಕು ಅಧ್ಯಕ್ಷ ದೇಶಾಣಿ ಆನಂದ ಅವರು ಬೇಲೂರು ಕ್ಷೇತ್ರದಲ್ಲಿ ಅಧಿಕಾರಿಗಳು ಹೆಚ್ಚು ಕಾಲ ಕೆಲಸ ಮಾಡಲು ಶಾಸಕರು ಬಿಡುತ್ತಿಲ್ಲ ಎಂದು ಆರೋಪಿಸಿದ್ದಾರೆ. ಅವರ ಮಾತು ಸರಿ ಏಕೆಂದರೆ ಶಾಸಕ ಹೆಚ್.ಕೆ.ಸುರೇಶ್ ಕ್ಷೇತ್ರದಲ್ಲಿ ಭ್ರಷ್ಟಾಚಾರಿಗಳಿಗೆ, ಸಾರ್ವಜನಿಕರ ವಿರೋಧಿ ಅಧಿಕಾರಿಗಳಿಗೆ ಕೆಲಸ ಮಾಡಲು ಅವಕಾಶ ನೀಡುವುದಿಲ್ಲ, ನಮ್ಮ ಶಾಸಕರದ್ದು ಜನ ಪರ ಆಡಳಿತ, ಅಧಿಕಾರಿಗಳ ಪರವಾದ ಆಡಳಿತ ಅಲ್ಲ. ಜನಸ್ನೇಹಿ ಅಧಿಕಾರಿಗಳು ಹೆಚ್ಚು ಕಾಲ ಉಳಿಯುತ್ತಾರೆ, ಭ್ರಷ್ಟರು ಬೇಗ ಹೊರ ನಡೆಯುತ್ತಾರೆ ಎಂದರು.

ಬಿಜೆಪಿ ಮಂಡಲ ಪ್ರತಿನಿಧಿ ಕೋಳಗುಂದ ಪ್ರಸಾದ್, ಕರಗುಂದ ಗ್ರಾಮ ಪಂಚಾಯಿತಿ ಅಧ್ಯಕ್ಷ ವಾಸು, ಯುವ ಮುಖಂಡ ಪವನ್, ಗ್ರಾಮ ಪಂಚಾಯಿತಿ ಸದಸ್ಯರಾದ ಮಧುಸೂದನ್, ವಡೇರಹಳ್ಳಿ ಮಧು ಇದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248